ಡಾ. ಕೆ. ಮುರಳಿಧರ
ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು

ದೂರವಾಣಿ : ಕಛೇರಿ : 22286773
22033239
ಕೊಠಡಿ ಸಂಖ್ಯೆ 263, ಎರಡನೇ ಮಹಡಿ
ವಿಧಾನಸೌಧ, ಬೆಂಗಳೂರು – 560 001

ಸಂಖ್ಯೆ: ಕಅಪ್ರಾ/ಕಾ3/ಕ.ಜಾ.ಸ-06/2020-21

ದಿನಾಂಕ: 18/11/2020

ಗೆ,
ಡಾ. ಉಷಾದೇವಿ ಹಿರೇಮಠ,
ಕನ್ನಡ ಉಪನ್ಯಾಸಕರು,
ಎಸ್.ಬಿ. ಕಲಾ ಹಾಗೂ ಕೆಸಿಪಿ ವಿಜ್ಞಾನ
ಮಹಾ ವಿದ್ಯಾಲಯ ಬಿಎಲ್ಡಿಇ ಸಂಸ್ಥೆ,
ವಿಜಯಪುರ.

ಮಾನ್ಯರೆ,

**ವಿಷಯ:** ಮಹಾನಗರ ಪಾಲಿಕೆ ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಕ ಮಾಡಿರುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 97 ಕೆಬಿಎಲ್ ಆಕ 2020, ಬೆಂಗಳೂರು, ದಿನಾಂಕ: 17/11/2020

2. ಸರ್ಕಾರದ ಆದೇಶ ಸಂಖ್ಯೆ: ಸಂಕಇ 18 ಕೆಓಎಲ್ 97, ಬೆಂಗಳೂರು, ದಿನಾಂಕ: 21/10/1997

*-*-*-*-*

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು **ಮಹಾನಗರ ಪಾಲಿಕೆ ಮಟ್ಟದಲ್ಲಿ** ರಚಿಸಿರುವ ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರಾಗಿ ಉಲ್ಲೇಖ (1)ರ ಸರ್ಕಾರದ ಆದೇಶಾನುಸಾರ ತಾವು ನೇಮಕವಾಗಿರುವುದಕ್ಕೆ ತುಂಬು ಹೃದಯದ ಅಭಿನಂದನೆಗಳು. ಪ್ರಾಧಿಕಾರದ ಕನ್ನಡಪರ ಆಶಯಗಳನ್ನು ಕಾಲಮಿತಿಯಲ್ಲಿ ಅನುಷ್ಠಾನಗೊಳಿಸುವ ಮಹತ್ವದ ಕಾರ್ಯಕ್ಕೆ ನಿಮ್ಮ ಸಹಕಾರ ಅತ್ಯವಶ್ಯವಾಗಿದೆ.

ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ತಮ್ಮ ಕಾರ್ಯವ್ಯಾಪ್ತಿಯ ಕುರಿತಂತೆ ವಿವರಿಸಲಾಗಿದ್ದು, ಈ ಪತ್ರದೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ

ಕಾರ್ಯದರ್ಶಿ
ಕನ್ನಡ ಅಭಿವೃದ್ಧಿ ಪ್ರಾಧಿಕಾರ

Scanned by CamScanner

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಹಾನಗರ ಪಾಲಿಕೆಯ ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರದ ಆದೇಶ ಸಂಖ್ಯೆ: ಕಸಂವಾ 10 ಕೆಬಿಎಲ್ 2018, ದಿನಾಂಕ:26.03.2018.

2. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಪತ್ರ ಸಂಖ್ಯೆ: ಕಅಪ್ರಾ/ಅ/95/2020-21, ದಿನಾಂಕ: 22.06.2020.

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯದಲ್ಲಿರುವ 11 ಮಹಾನಗರ ಪಾಲಿಕೆಗಳಿಗೆ ಕನ್ನಡ ಜಾಗೃತಿ ಸಮಿತಿಗಳಿಗೆ ಅಧಿಕಾರೇತರ ಸದಸ್ಯರನ್ನು ನಾಮ ನಿರ್ದೇಶನ ಮಾಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (2)ರಲ್ಲಿ ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರು ರಾಜ್ಯ ಸರ್ಕಾರವು ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಸರ್ಕಾರದ ಭಾಷಾನೀತಿ ಅನುಷ್ಠಾನದಲ್ಲಿ ಜನರು ಪಾಲ್ಗೊಳ್ಳುವಂತೆ ನೋಡಿಕೊಳ್ಳಲು ಜಿಲ್ಲಾ, ತಾಲ್ಲೂಕು ಮಟ್ಟದಲ್ಲಿ ಹಾಗೂ ಮಹಾನಗರಗಳ ಪಾಲಿಕೆಗಳ ಮಟ್ಟದಲ್ಲಿ ಕನ್ನಡ ಜಾಗೃತಿ ಸಮಿತಿಗಳನ್ನು ರಚಿಸಲು ಸರ್ಕಾರವು (ಆದೇಶ ಸಂಖ್ಯೆ: ಸಂಕಇ/18/ಕೆಬಿಎಲ್/97) ದಿನಾಂಕ: 09.07.1998ರಲ್ಲಿ ಆದೇಶ ಹೊರಡಿಸಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾ/10/ಕೆಬಿಎಲ್/2018, ದಿನಾಂಕ: 26.03.2018ರನ್ವಯ 11 ಮಹಾನಗರ ಪಾಲಿಕೆಗಳ ಹಾಗೂ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕನ್ನಡ ಜಾಗೃತಿ ಸಮಿತಿಗಳಿಗೆ ನೇಮಿಸಲಾಗಿದ್ದ ಸದಸ್ಯರ ಸದಸ್ಯತ್ವವನ್ನು ರದ್ದುಪಡಿಸಿ ಸದರಿ ಮಹಾನಗರ ಪಾಲಿಕೆಗಳ ಕನ್ನಡ ಜಾಗೃತಿ ಸಮಿತಿಗಳಿಗೆ ನೂತನ ಅಧಿಕಾರೇತರ ಸದಸ್ಯರುಗಳನ್ನು ನೇಮಿಸಲು ಅಗತ್ಯ ಆದೇಶವನ್ನು ಹೊರಡಿಸಲು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಕಸಂವಾ 97 ಕೆಬಿಎಲ್ ಆಕ 2020, ಬೆಂಗಳೂರು, ದಿನಾಂಕ:17.11.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯದಲ್ಲಿರುವ 11 ಮಹಾನಗರ ಪಾಲಿಕೆಗಳ ಹಾಗೂ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 28 ವಿಧಾನಸಭಾ ಕ್ಷೇತ್ರಗಳ ಕನ್ನಡ ಜಾಗೃತಿ ಸಮಿತಿಗಳಿಗೆ ನೇಮಿಸಲಾಗಿದ್ದ ಸರ್ಕಾರದ ಆದೇಶ ಸಂಖ್ಯೆ: ಕಸಂವಾ 10 ಕೆಬಿಎಲ್ 2018, ದಿನಾಂಕ: 26.03.2018ರ ಆದೇಶವನ್ನು ಹಿಂಪಡೆದು ಈ ಆದೇಶಕ್ಕೆ ಲಗತ್ತಿಸಿರುವ ಅನುಬಂಧ-1 ಮತ್ತು 2ರಲ್ಲಿರುವಂತೆ ಅಧಿಕಾರೇತರ ಸದಸ್ಯರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಾಮ ನಿರ್ದೇಶನ ಮಾಡಿ ಆದೇಶಿಸಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಸಂಕಇ 18 ಕೆಬಿಎಲ್ 1997, ದಿನಾಂಕ: 21.10.1997ರಲ್ಲಿ ವಿಧಿಸಿರುವ ಷರತ್ತು ಹಾಗೂ ನಿಬಂಧನೆಗಳನ್ನು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಹೆಚ್.ಕೆ.ಸುರೇಶಬಾಬು)
ಸರ್ಕಾರದ ಅಧೀನ ಕಾರ್ಯದರ್ಶಿ,
ಕನ್ನಡ ಮತ್ತು ಸಂಸ್ಕೃತಿ ಇಲಾಖೆ,
(ಆಡಳಿತ ಕನ್ನಡ)

**ಪ್ರತಿಯನ್ನು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್.ಎಸ್.ಎ), (ಇ & ಆರ್.ಎಸ್.ಇ)ಕರ್ನಾಟಕ, ಹೊಸ ಕಟ್ಟಡ "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.

....2

Scanned by CamScanner

ಕನ್ನಡ ಅಭಿವೃದ್ಧಿ ಪ್ರಾಧಿಕಾರ

ಕನ್ನಡ ಜಾಗೃತಿ ಸಮಿತಿ

## ಗುರುತಿನ ಚೀಟಿ



ಹೆಸರು : ಡಾ. ಉಷಾದೇವಿ ಹಿರೇಮಠ

ಪದನಾಮ : ಕನ್ನಡ ಜಾಗೃತಿ ಸಮಿತಿ ಸದಸ್ಯರು,
ವಿಜಯಪುರ ಮಹಾನಗರ ಪಾಲಿಕೆ

ಕ್ರ. ಸಂ : ಕಜಾಸ/232/20-21

ಆಧಾರ್ : 8688 8563 8329

ವಿಳಾಸ : ಕನ್ನಡ ಉಪನ್ಯಾಸಕರು, ಎಸ್.ಬಿ. ಕಲಾ
ಹಾಗೂ ಕೆಸಿಪಿ ವಿಜ್ಞಾನ ಮಹಾ ವಿದ್ಯಾಲಯ
ಬಿಎಲ್ಡಿಇ ಸಂಸ್ಥೆ, ವಿಜಯಪುರ

ದೂ. ಸಂಖ್ಯೆ : 90358 10016

**ಅವಧಿ: 01.11.2020 ರಿಂದ 31.10.2021**

Scanned by CamScanner